ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ ಕೊಪ್ಪಳ

ಸಿ.ಸಿ.ನಂಃ 1047/2019

ಚಾಸಾಃ( 03 ) ಪ್ರಾಸಾ ( 02 )

ಸಾಕ್ಷಿಗೆ ಪ್ರಮಾಣ ಭೋದಿಸಲಾಯಿತು.

ದಿನಾಂಕಃ 17-09-2025

| | |
|---|---|
| ಸಾಕ್ಷಿದಾರರ ಹೆಸರು | ರಾಮಪ್ಪ |
| ತಂದೆ ಹೆಸರು | ಬಸಪ್ಪ |
| ವಯಸ್ಸು | 65 ವರ್ಷ, |
| ಉದ್ಯೋಗ | ಇಲ್ಲ |
| ವಾಸಸ್ಥಳ | ಘಟ್ಟಿರೆಡ್ಡಿಹಾಳ |

**ಮುಖ್ಯ ವಿಚಾರಣೆಃ ಸಸಅ ರವರಿಂದ:**

ನಾನು ಘಟ್ಟಿರೆಡ್ಡಿಹಾಳ ಗ್ರಾಮದ ಅಂಚೆ ಇಲಾಖೆಯಲ್ಲಿ ಖಾತೆಯನ್ನು ಹೊಂದಿದ್ದು, ಆರೋಪಿ ಪೋಸ್ಟ ಮಾಸ್ಟರ್ ಅಗಿ ಕೆಲಸ ಮಾಡುತ್ತಿದ್ದು, ಅಂಚೆ ಇಲಾಖೆಯಲ್ಲಿ ಖಾತೆ ಹೊಂದಿ ಹೂಡಿದ ಹಣವನ್ನು ದುರ್ಬಳಕೆ ಮಾಡಿಕೊಂಡಿರುತ್ತಾನೆ ಎಂದು ನನಗೆ ಪೋಲಿಸರು ತಿಳಿಸಿರುತ್ತಾರೆ. ಸದರಿ ಹಣದ ದುರ್ಬಳಕ್ಕೆ 2013 ರಲ್ಲಿ ಅಗಿದ್ದು ಅಂದಾಜು 10 ರಿಂದ 15 ಜನರ ಹಣ ದುರ್ಬಳಕೆಯಾಗಿರುತ್ತದೆ. ನನ್ನ ಖಾತೆಯಿಂದ ಯಾವುದೇ ಹಣ ಹೋಗಿರುವುದಿಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

ಆರೋಪಿಯು ಗೈರು ಹಾಜರಿದ್ದು ಆರೋಪಿ ಪರ ವಕೀಲರು ವಿನಾಯಿತಿ ಅರ್ಜಿಯನ್ನು ಸಲ್ಲಿಸಿ, ಆರೋಪಿಯನ್ನು ಗುರುತಿಸುವಿಕೆಗೆ ತಕರಾರು ಇಲ್ಲ ಎಂದು ಹೇಳಿದ್ದು, ಅಕಾರಣ ಆರ್ಜಿಯನ್ನು ಪುರಸ್ಕರಿಸಲಾಗಿರುತ್ತದೆ. ಸಾಕ್ಷಿಯು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ ಎಂದು ಭಾವಿಸಲಾಯಿತು .

**(ಈ ಹಂತದಲ್ಲಿ ಸಾಕ್ಷಿದಾರ ಅಭಿಯೋಜನೆಯ ಕೇಸಿಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದಾರೆ ಅಂತ ಹಿಸಸಅ ರವರು ಈ ಸಾಕ್ಷಿಯನ್ನು** ಭಾಗಶಃ ಪ್ರ**ತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಕೋರಿಕೊಂಡಿದ್ದು, ಪಾಟೀಸವಾಲಿಗೆ ಅನುಮತಿ ನೀಡಲಾಗಿದೆ.)**

**ಪಾಟೀ ಸವಾಲುಃ ಸಸಅ ರವರಿಂದಃ**

ಆರೋಪಿ ನನ್ನ ಖಾತೆಗೆ ರೂ. 700 ರೂ. ಜಮಾ ಮಾಡಿರುತ್ತೇನೆ ಎಂದು ಹೇಳಿ ತನ್ನ ಸ್ವಂತಕ್ಕೆ ಬಳಸಿಕೊಂಡಿರುತ್ತಾನೆ ಎಂದರೆ ಸಾಕ್ಷಿಯು ನನಗೆ ಗೊತ್ತಿಲ್ಲ ಎಂದು ನಂತರ ಹೌದು ಎಂದು ನುಡಿಯುತ್ತಾನೆ. ಸಾಕ್ಷಿ ತನ್ನ ಅಂಚೆ ಕಚೇರಿಯ ಪಾಸ್ ಪುಸ್ತಕವನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 24 ಎಂದು ಗುರುತಿಸಲಾಯಿತು.

ಅಂಚೆ ಇಲಾಖೆಯವರು ನನ್ನ ಬಳಿ ಬಂದು ಹೇಳಿಕೆಯನ್ನು ಪಡೆದಿರುತ್ತಾರೆ ಎಂದರೆ ಸರಿ. ಪೋಲಿಸರಿಗೂ ಸಹ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದ**

ನಾನು ನನ್ನ ಹೆಳಿಕೆಯನ್ನು ಯಾರ ಮುಂದೆ ನೀಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನನ್ನ ಹೇಳಿಕೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ನನ್ನ ಖಾತೆಯಲ್ಲಿ ರೂ. 700/- ಜಮಾ ಇದೆ ಎಂದರೆ ಸರಿ.

**ಮರು ವಿಚಾರಣೆ ಇಲ್ಲ.**

**(ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

ಓ. ಹೇ. ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ

**ಹೆ. ಜೆ ಎಂ ಎಫ್ ಸಿ ಕೊಪ್ಪಳ.**